ಅನುದಾನದ ಲಭ್ಯತೆಯನ್ನು ಆಧರಿಸಿ ಹುದ್ದೆಗಳನ್ನು ಮಂಜೂರು ಮಾಡಲಾಗುವುದು.

ಇ) ವಿದ್ಯಾರ್ಥಿಗಳ ಸಂಖ್ಯೆ 976

ಉಪನ್ಯಾಸಕರ ಸಂಖ್ಯೆ 18

ಖಾಲಿ ಹುದ್ದೆಗಳ ಸಂಖ್ಯೆ ಇಲ್ಲ

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ಮತ್ತು ಸದಸ್ಯರುಗಳು ಪಡೆದ ವೇತನದ ಬಗ್ಗೆ

1426(442); ಶ್ರೀ ಗೋಪಾಲಯ್ಯ. ಕೆ (ಮಹಾಲಕ್ಷ್ಮೀ ಲೇಔಟ್)

ಅ) ಕಳೆದ ಮೂರು ವರ್ಷಗಳಿಂದ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಇತರ ಸದಸ್ಯರುಗಳು ಪಡೆದ ವೇತನ, ಭತ್ಯೆಗಳು ಹಾಗೂ ಪ್ರವಾಸಗಳಿಗಾಗಿ ಖರ್ಚು ಮಾಡಿದ ಹಣವೆಷ್ಟು;

ಆ) ಕಳೆದ ಮೂರು ವರ್ಷಗಳಲ್ಲಿ ಪ್ರಾಧಿಕಾರದ ಅಧ್ಯಕ್ಷರು ರಾಜ್ಯ, ಹೊರ ರಾಜ್ಯಗಳಲ್ಲಿ ಪ್ರವಾಸ ಕೈಗೊಂಡ ಸಂಖ್ಯೆ ಎಷ್ಟು;

ಇ) ಈ ಪ್ರವಾಸಗಳಿಗಾಗಿ ತಗುಲಿದ ವೆಚ್ಚವೆಷ್ಟು;

ಈ) ಕಳೆದ ಮೂರು ವರ್ಷಗಳಲ್ಲಿ ಈ ಪ್ರಾಧಿಕಾರವು ಸರ್ಕಾರಕ್ಕೆ ಸಲ್ಲಿಸಿರುವ ವರದಿಗಳೆಷ್ಟು;

ಉ) ಈ ವರದಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು;

ಊ) ಈ ಪ್ರಾಧಿಕಾರವನ್ನು ರದ್ದುಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಶ್ರೀಮತಿ ಉಮಾಶ್ರೀ (ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)

ಅ) ₹ 57,21,603–00

ಆ) 176

ಇ) ₹ 26,92,323–00

ಈ) ಒಂದು ವರದಿ

(ನಾಡು–ನುಡಿ ಅಧ್ಯಯನ ವರದಿ)

ಉ) ನಾಡು–ನುಡಿ ಅಧ್ಯಯನ ವರದಿಯಲ್ಲಿನ ಶಿಫಾರಸ್ಸುಗಳು ಸರ್ಕಾರದ ವಿವಿಧ ಇಲಾಖೆಗಳಿಗೆ ಸಂಬಂಧಿಸಿದದು, ಇವುಗಳನ್ನು ಅನುಷ್ಠಾನಗೊಳಿಸಲು ಕ್ರಮವಹಿಸಲಾಗುತ್ತಿದೆ.

ಊ) ಇಲ್ಲ

ಕರ್ನಾಟಕ ಪರೀಕ್ಷಾ ಪ್ರಾಧಿಕಾರ

1427(1447); ಶ್ರೀ ಗೋಪಾಲಯ್ಯ.ಕೆ. (ಮಹಾಲಕ್ಷ್ಮೀ ಲೇಔಟ್)

ಅ) 2013–14ನೇ ಸಾಲಿನಲ್ಲಿ ನಡೆದ ವೃತ್ತಿಪರ ಕೋರ್ಸುಗಳ ಕೌನ್ಸಿಲಿಂಗ್‌ನಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಲ್ಲಿ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಇದರಿಂದ ಎಷ್ಟು ಜನ ಇಂಜಿನಿಯರಿಂಗ್, ವೈದ್ಯಕೀಯ ಹಾಗೂ ದಂತ ಕೋರ್ಸುಗಳ ಪ್ರತಿಭಾವಂತ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಅನ್ಯಾಯವಾಗಿದೆ;

ಇ) ವೃತ್ತಿಪರ ಕೋರ್ಸುಗಳ ಕೌನ್ಸಿಲಿಂಗ್‌ನಲ್ಲಿ ನಡೆಯಬಹುದಾದ ಅವ್ಯವಹಾರ ತಡೆಗಟ್ಟಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು;

ಈ) ಈ ರೀತಿ ನಡೆದಿದೆ ಎನ್ನಲಾದ ಅವ್ಯವಹಾರ ಪ್ರಕರಣದ ಬಗ್ಗೆ ಸರ್ಕಾರ ಕೈಗೊಂಡಕ್ರಮಗಳೇನು?